ರ-72-64

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.

## ವಿಷಯ

ಸರ್ಕಾರಿ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಶೈಕ್ಷಣಿಕ ಗುಣಮಟ್ಟ ಕುಂಠಿತವಾಗುತ್ತಿರುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯಬಸುತ್ತೇನೆ.

## ಸರ್ಕಾರದ ಉತ್ತರ

ಕಾಲೇಜು ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಪ್ರಸ್ತುತ ಒಟ್ಟು 1352 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಖಾಲಿ ಇರುತ್ತವೆ. ದಿನಾಂಕ: 03.08.2019 ರ ಸರ್ಕಾರದ ಪತ್ರ ಸಂಖ್ಯೆ: ಇಡಿ 185 ಡಿಸಿಇ 2018 ರಲ್ಲಿ 2019–20 ಮತ್ತು 2020–21ನೇ ಸಾಲಿನಲ್ಲಿ ಒಟ್ಟು 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ. ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ದಿನಾಂಕ: 10.02.2020ರ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019 (ಭಾಗ–3) ರಲ್ಲಿ ಕರಡು ವಿಶೇಷ ನೇಮಕಾತಿ ನಿಯಮಗಳನ್ನು ಹೊರಡಿಸಿದ್ದು, ಸಾರ್ವಜನಿಕರಿಂದ ಆಕ್ಷೇಪಣೆ/ಸಲಹೆಗಳನ್ನು ಆಹ್ವಾನಿಸಲಾಗಿದೆ. ಸರ್ಕಾರದಿಂದ ಅಂತಿಮ ವಿಶೇಷ ನೇಮಕಾತಿ ನಿಯಮಗಳನ್ನು ಜಾರಿಗೊಳಿಸಿದ ನಂತರ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕಾರ್ಯಭಾರಕ್ಕನುಗುಣವಾಗಿ ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು.

ಮುಂದುವರೆದು, ವಿದ್ಯಾರ್ಥಿಗಳ ಶೈಕ್ಷಣಿ ಹಿತದೃಷ್ಟಿಯಿಂದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಲಿ ಇರುವ /ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅರ್ಹ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಂಡು, ಪಾಠ–ಪ್ರವಚನಗಳನ್ನು ನಡೆಸಲಾಗುತ್ತಿದೆ. ಇದರಿಂದ ಯಾವುದೇ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ.

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)
ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಇಡಿ 81 ಡಿಸಿಇ 2020